ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.

ಸಂಖ್ಯೆ.:ಸಿ7(2)ಪ್ರಾಶಿಅ-ಶಾ-ಮ-ಸು 30/2018-19 ದಿನಾಂಕ: 18-10-2019

: : ಜ್ಞಾಪನಾ : :

ವಿಷಯ: ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ನವದೆಹಲಿ ಇವರು ಶಾಲೆಯಲ್ಲಿನ ಮಕ್ಕಳ ಸುರಕ್ಷತೆ ಮತ್ತು ಭದ್ರತೆಯ ಕುರಿತು ಹೊರಡಿಸಿರುವ ಮಾರ್ಗ ಸೂಚಿಯನ್ನು ಅನುಸರಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಪತ್ರದ ಸಂಖ್ಯೆ: ಇಡಿ 191 ಪಿಜಿಸಿ 2018, ದಿನಾಂಕ:16.04.2018.

2. ಶ್ರೀ ಪ್ರಿಯಾಂಕ್ ಕಾನೊಂಗೋ, ಸದಸ್ಯರು, ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಭಾರತ ಸರ್ಕಾರ, ನವದೆಹಲಿ ರವರ ಪತ್ರ ಸಂಖ್ಯೆ:2501/05/2016 - NCPCR/RTE , ದಿನಾಂಕ:26.02.2018, 16-05-2019.

3. ಈ ಕಛೇರಿ ಸಮಪತ್ರದ ಸುತ್ತೋಲೆ ದಿನಾಂಕ:17.05.2018.

4. ಸರ್ಕಾರದ ಪತ್ರದ ಸಂಖ್ಯೆ: ಇಡಿ 680 ಪಿಜಿಸಿ 2018, ದಿನಾಂಕ:10.01.2019.

5. ಸರ್ಕಾರದ ಪತ್ರದ ಸಂಖ್ಯೆ: ಇಪಿ 92 ಪಿಜಿಸಿ 2019, ದಿನಾಂಕ:09-08-2019.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ [1] ಮತ್ತು [2] ಪತ್ರಗಳಂತೆ ಶಾಲೆಗಳಲ್ಲಿನ ಮಕ್ಕಳ ಸುರಕ್ಷತೆ ಮತ್ತು ಭದ್ರತೆಯನ್ನು ಖಾತ್ರಿ ಪಡಿಸಿಕೊಳ್ಳುವ ದೃಷ್ಟಿಯಿಂದ ಮಾನ್ಯ ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ **"MANUAL ON SAFETY AND SECURITY OF CHILDREN IN SCHOOLS"** ಎಂಬ ಕೈಪಿಡಿಯನ್ನು ಪರಿಚಯಿಸಿದ್ದು, ಮಕ್ಕಳ ಶಿಕ್ಷಣ, ಬೆಳವಣಿಗೆ ಮತ್ತು ನಾಳಿನ ಭವ್ಯ ಭಾರತದ ಸತ್ಪ್ರಜೆಗಳನ್ನು ನಿರ್ಮಾಣ ಮಾಡುವಲ್ಲಿ ನಿರತರಾಗಿರುವ ಶಾಲೆಗಳಲ್ಲಿ ಭದ್ರತೆ ಮತ್ತು ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ಸಂಬಂಧ ಮಾರ್ಗಸೂಚಿಗಳನ್ನೊಳಗೊಂಡ ಕೈಪಿಡಿಯನ್ನು ಅಂತಿಮಗೊಳಿಸಿ ಬಿಡುಗಡೆ ಮಾಡಲಾಗಿರುತ್ತದೆ. ಈ ಸಂಬಂಧ ಶಲೆಗಳು ಸದರಿ ಕೈಪಿಡಿಯಲ್ಲಿನ ಎಲ್ಲಾ ಕ್ರಮಗಳನ್ನು ಕೈಗೊಂಡು, ಸದರಿ ಕೈಪಿಡಿಯೊಂದಿಗೆ ಅನುಬಂಧಿಸಲಾದ ಚೆಕ್‌ಲಿಸ್ಟ್‌ನಲ್ಲಿನ ಎಲ್ಲಾ ಅಂಶಗಳನ್ನು ತಮ್ಮ ವ್ಯಾಪ್ತಿಯಲ್ಲಿ ಎಲ್ಲಾ ಶಾಲೆಗಳ ಮುಖ್ಯಸ್ಥರು ಸ್ವಯಂ ಮೌಲ್ಯಮಾಪನ ಮಾಡಿಕೊಳ್ಳುವಂತೆ ಸೂಚಿಸಲು ಉಲ್ಲೇಖ(2)ರ ಪತ್ರದಲ್ಲಿ ತಿಳಿಸಿರುವ ಹಿನ್ನೆಲೆಯಲ್ಲಿ ಈ ಸಂಬಂಧ ಅಗತ್ಯ ಕ್ರಮಕೈಗೊಂಡು ವರದಿಯನ್ನು ಸಲ್ಲಿಸುವಂತೆ ಉಲ್ಲೆಖ (1)ರ ಸರ್ಕಾರದ ಪತ್ರದಲ್ಲಿ ನಿರ್ದೇಶಿಸಿರುವ ಹಿನ್ನೆಲೆಯಲ್ಲಿ ಉಲ್ಲೇಖ(3) ರಂತೆ ಈಗಾಗಾಲೇ ಕ್ರಮವಹಿಸಲು ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ), ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಕ್ರಮವಹಿಸಲು ಸೂಚಿಸಲಾಗಿತ್ತು.

ಉಲ್ಲೇಖ[4]ರ ಸರ್ಕಾರದ ಪತ್ರದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಐ.ಸಿ.ಪಿ.ಎಸ್/ಜೆಸಿಎಲ್/ಡಬ್ಲ್ಯೂಪಿ-473/2015-16/477, ದಿನಾಂಕ:26-10-2018ರ ಪತ್ರದಂತೆ ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಪರಿಚಯಿಸಿರುವ ಕೈಪಿಡಿಯಲ್ಲಿ **Child Rights, School Safety, Roles and Responsibilities of Teachers, Monitoring of School Management Committee, Parents teachers Association, School Management, Principal/teachers/Staff etc.** ಗಳನ್ನು ಒಳಗೊಂಡಿರುತ್ತದೆ. **(ಪ್ರತಿ ಲಗತ್ತಿಸಿದೆ)**

ಇದಾದ ನಂತರದಲ್ಲಿ ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ನವದೆಹಲಿ ಇವರು ಕೆಲವು ಅಂಶಗಳಿಗೆ Corrigendum to "Manual on Safety and Security of Children on Schools" ಎಂದು ದಿನಾಂಕ:16-05-2019ರಲ್ಲಿ ತಿದ್ದುಪಡಿಯನ್ನು ತಂದಿರುತ್ತಾರೆ. ಸದರಿ ತಿದ್ದುಪಡಿಯಲ್ಲಿ ಮಾಹಿತಿಯನ್ನು

ಅಂತರ್ಜಾಲದ Link:http://ncpcr.gov.in/showfile.php?lang=&level=l&&sublinked=1397&lid=1550 ಮೂಲಕ ಡೌನ್‌ಲೋಡ್ ಮಾಡಿಕೊಂಡು ತಿದ್ದುಪಡಿಯಾದ ಚೆಕ್‌ಲಿಸ್ಟ್‌ನ ಅಂಶಗಳಿಗೆ ಸಂಬಂಧಪಟ್ಟಂತೆ ಹಾಗೂ ಈ ಹಿಂದೆ ಸುತ್ತೋಲೆಯಲ್ಲಿ ತಿಳಿಸಿರುವ ಅಂಶಗಳು ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಬಹಳ ಉಪಯುಕ್ತ ಅಂಶಗಳಾಗಿದ್ದು, ಸದರಿ ಕೈಪಿಡಿಯನ್ನು ರಾಜ್ಯದ ಎಲ್ಲಾ ಶಾಲೆಗಳಲ್ಲಿ ಅನುಸರಿಸಲು ಸೂಕ್ತ ಕ್ರಮ ಕೈಗೊಳ್ಳಲು ಸೂಚಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ನವದೆಹಲಿ ಇವರು ಶಾಲೆಯಲ್ಲಿನ ಮಕ್ಕಳ ಸುರಕ್ಷತೆ ಮತ್ತು ಭದ್ರತೆಯ ಕುರಿತು ಹೊರಡಿಸಿರುವ ಮಾರ್ಗ ಸೂಚಿಯಲ್ಲಿನ ಅಂಶಗಳನ್ನು ಹಾಗೂ ತಿದ್ದುಪಡಿಯಲ್ಲಿನ ಅಂಶಗಳನ್ನು ಕಟ್ಟುನಿಟ್ಟಾಗಿ ಶಾಲೆಗಳಲ್ಲಿ ಅನುಸರಿಸಲು ಮತ್ತೊಮ್ಮೆ ಸೂಚಿಸಲಾಗಿದೆ. ಶಾಲೆಗಳಲ್ಲಿ ಈ ಅಂಶಗಳನ್ನು ಅಳವಡಿಸಿಕೊಂಡಿರುವ ಬಗ್ಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲಾ ಆಡಳಿತ ಮಂಡಳಿಗಳಿಂದ ಚೆಕ್‌ಲಿಸ್ಟ್‌ನಲ್ಲಿ ಮಾಹಿತಿ ಪಡೆದು ಸಂರಕ್ಷಿಸಿಡುವುದು. ಈ ಬಗ್ಗೆ ಉಪನಿರ್ದೇಶಕರು(ಆಡಳಿತ) ಇವರು ಮೇಲ್ವಿಚಾರಣೆ ಮಾಡುವುದು. ತಾಲ್ಲೂಕು / ವಲಯಗಳಿಂದ ಕ್ರೋಢೀಕೃತ ಅಂಕಿಅಂಶಗಳ ಮಾಹಿತಿಯನ್ನು ಎಕ್ಸೆಲ್ ನಮೂನೆಯಲ್ಲಿ ಉಪನಿರ್ದೇಶಕರು(ಆಡಳಿತ) ಇವರು ಪಡೆದು ಸ್ಪಷ್ಟ ವರದಿಯನ್ನು ಅಗತ್ಯ ದಾಖಲೆಗಳೊಂದಿಗೆ ದಿನಾಂಕ:30-11-2019ರ ಒಳಗಾಗಿ ಸಲ್ಲಿಸಲು ಮತ್ತೊಮ್ಮೆ ಸೂಚಿಸಲಾಗಿದೆ.

[ಎಂ.ಪಿ.ಮಾದೇಗೌಡ]
ನಿರ್ದೇಶಕರು[ಪ್ರಾಥಮಿಕ ಶಿಕ್ಷಣ]

ಗೆ.

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು / ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಶಾಲೆಗಳ ಮುಖ್ಯಸ್ಥರು/ ಆಡಳಿತ ಮಂಡಳಿಯವರಿಗೆ ಸಂಬಂಧಿಸಿದ ತಾಲ್ಲೂಕು / ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001 ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ವಿಭಾಗ, ಧಾರವಾಡ. ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ, ಕಲಬುರಗಿ. ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
6. ನಿರ್ದೇಶಕರು, (ಪ್ರಾಥಮಿಕ ಶಿಕ್ಷಣ), (ಪ್ರೌಢಶಿಕ್ಷಣ), (ಡಿಎಸ್‌ಇಆರ್‌ಟಿ), (ಮೈನಾರಿಟಿ) (ಸಮಗ್ರ ಶಿಕ್ಷಣ ಅಭಿಯಾನ) ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
7. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ವಿಭಾಗ, ಆಯುಕ್ತರ ಕಛೇರಿ, ಬೆಂಗಳೂರು ವೆಬ್‌ಸೈಟ್ ನಲ್ಲಿ ಪ್ರಕಟಿಸುವುದಕ್ಕಾಗಿ.
8. ಕಛೇರಿ ಪ್ರತಿ.